ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಶಾಸಕರ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 29/8/2020

## ಶಾಸಕ ಅಖಂಡಗೆ ನೋಟಿಸ್

**ಬೆಂಗಳೂರು:** ಡಿ.ಜೆ.ಹಳ್ಳಿ ಮತ್ತು ಕೆ.ಜಿ.ಹಳ್ಳಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ ಅಖಂಡ ಶ್ರೀನಿವಾಸಮೂರ್ತಿಗೆ



ಹೈಕೋರ್ಟ್ ನೋಟಿಸ್ ಜಾರಿ ಮಾಡಿದೆ. ಆರೋಪಿಗಳ ವಿರುದ್ಧ ಕೋಕಾ ಕಾಯಿದೆ ಹಾಗೂ ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯಿದೆ ಅನ್ವಯ ಪ್ರಕರಣ ದಾಖಲಿಸಿಕೊಳ್ಳಲು ರಾಜ್ಯ ಸರಕಾರಕ್ಕೆ ನಿರ್ದೇಶಿಸುವಂತೆ ಕೋರಿ ವಕೀಲ ಅಮೃತೇಶ್ ದಾಖಲಿಸಿರುವ ಅರ್ಜಿ ಆಧರಿಸಿ ಶಾಸಕರಿಗೆ ನೋಟಿಸ್ ನೀಡುವ ಆದೇಶ ಹೊರಡಿಸಲಾಗಿದೆ. »12

ಬತ್ತಳಿಕೆ

## ಶಾಸಕ ಅಖಂಡಗೆ ನೋಟಿಸ್

» ನಮ್ಮ ಮೊದಲ ಪುಟದಿಂದ

ವಿಚಾರಣೆ ವೇಳೆ ವಾದ ಮಂಡಿಸಿ ಮಾತನಾಡಿದ ವಕೀಲ ಅಮೃತೇಶ್, ''ಕಳೆದ ಆ.11ರಂದು ಶಾಸಕರ ಮನೆಗೆ ಬೆಂಕಿ ಹಾಕಿ ಹಾನಿ ಮಾಡಲಾಗಿದೆ. ಇದಕ್ಕೆ ಪ್ರತಿಯಾಗಿ ಅವರು ಆ.14ರಂದು ಪೊಲೀಸರಿಗೆ ದೂರು ದಾಖಲಿಸಿದ್ದಾರೆ. ನಂತರವೂ ಪೊಲೀಸ್ ಆಯುಕ್ತರು, ಪೊಲೀಸ್ ಠಾಣೆಗಳಿಗೆ ಭೇಟಿ ನೀಡಿ ಮಾಧ್ಯಮಗಳಿಗೆ ಹೇಳಿಕೆ ನೀಡಿದ್ದಾರೆ. ಇದು ತನಿಖೆಯಲ್ಲಿ ಹಸ್ತಕ್ಷೇಪಕ್ಕೆ ಅವಕಾಶ ನೀಡಿದೆ. ಈ ವಿಚಾರವಾಗಿ ಶಾಸಕರಿಗೆ ಸೂಕ್ತ ನಿರ್ದೇಶನ ನೀಡಬೇಕು,'' ಎಂದು ವಿನಂತಿಸಿದರು. ಅಮೃತೇಶ್ ವಾದ ಆಲಿಸಿದ ನ್ಯಾಯಪೀಠವು ಶಾಸಕರಿಗೆ ನೋಟಿಸ್ ಜಾರಿ ಮಾಡುವಂತೆ ಆದೇಶಿಸಿ ದಿನದ ವಿಚಾರಣೆಯನ್ನು ಮುಂದೂಡುವ ನಿರ್ಧಾರ ಪ್ರಕಟಿಸಲಾಯಿತು.

## ಆಕ್ಷೇಪಣೆ ಸಲ್ಲಿಸಲು ಆದೇಶ

ಗಲಭೆ ಪ್ರಕರಣವನ್ನು ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್ಐಎ)ಗೆ ವಹಿಸುವಂತೆ ರಾಜ್ಯ ಸರಕಾರಕ್ಕೆ ನಿರ್ದೇಶನ ನೀಡುವಂತೆ ಬೆಂಗಳೂರಿನ ಗಿರೀಶ್ ಭಾರದ್ವಾಜ್ ಅವರು ಪಿಐಎಲ್ ಅರ್ಜಿ ದಾಖಲಿಸಿದ್ದಾರೆ. ಅರ್ಜಿ ಆಧರಿಸಿ ಆಕ್ಷೇಪಣೆ ದಾಖಲಿಸುವಂತೆ ಸರಕಾರಕ್ಕೆ ಸೂಚಿಸಿ ವಿಚಾರಣೆಯನ್ನು ಸೆ.11ಕ್ಕೆ ನಿಗದಿಗೊಳಿಸುವ ಆದೇಶವನ್ನು ಪೀಠವು ಪ್ರಕಟಿಸಿದೆ.